**All India Radio: Bangalore**
**Regional Bulletin In Kannada**
**23.07.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.07.2025 / 6.40 p.m.**

**ಮುಖ್ಯಾಂಶಗಳು**

- **ಸಣ್ಣವರ್ತಕರಿಂದ ೩ ವರ್ಷದ ಜಿಎಸ್‌ಟಿ ಬಾಕಿ ವಸೂಲಾತಿ ಮಾಡುವುದಿಲ್ಲ – ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ**

- **ಸೆಪ್ಟೆಂಬರ್ ೨೨ ರಿಂದ ರಾಜ್ಯದಲ್ಲಿ ೧೫ ದಿನಗಳ ಕಾಲ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ**

- **ಮಹದಾಯಿ ವಿಚಾರದಲ್ಲಿ ಮಲತಾಯಿ ಧೋರಣೆ- ಕೇಂದ್ರ ಸರ್ಕಾರದ ವಿರುದ್ಧ ಸಚಿವ ಹೆಚ್.ಕೆ.ಪಾಟೀಲ್ ಅಸಮಾಧಾನ**

- **ಬೆಂಗಳೂರಿನ ಕಲಾಸಿಪಾಳ್ಯ ಬಸ್ ನಿಲ್ದಾಣದಲ್ಲಿ ಜಿಲೆಟಿನ್ ಕಡ್ಡಿ, ಸ್ಫೋಟಕ ವಸ್ತು ಪತ್ತೆ – ಪೊಲೀಸರಿಂದ ಪರಿಶೀಲನೆ**

<><><><>

ಜಿಎಸ್‌ಟಿ ನೋಟಿಸ್ ಪಡೆದ ವರ್ತಕರಿಂದ ೩ ವರ್ಷದ ತೆರಿಗೆ ಬಾಕಿ ವಸೂಲಾತಿ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ೪೦ ಲಕ್ಷ ರೂಪಾಯಿ ವ್ಯವಹಾರ ನಡೆಸಿದ್ದಕ್ಕೆ ರಾಜ್ಯ ಸರ್ಕಾರದ ವಾಣಿಜ್ಯ ತೆರಿಗೆ ಇಲಾಖೆಯು ವರ್ತಕರಿಗೆ ನೋಟಿಸ್ ಜಾರಿ ಮಾಡಿದ್ದಕ್ಕೆ ಭಾರೀ ಟೀಕೆ ವ್ಯಕ್ತವಾದ ಬೆನ್ನಲ್ಲೇ ಮುಖ್ಯಮಂತ್ರಿ ಇಂದು ತೆರಿಗೆ ಇಲಾಖೆಯ ಅಧಿಕಾರಿಗಳು, ವರ್ತಕ ಸಂಘದ ಪ್ರತಿನಿಧಿಗಳ ಜೊತೆ ಸಭೆ ನಡೆಸಿದರು. ಬಳಿಕ ಮಾತನಾಡಿದ

ಅವರು, ನೋಟಿಸ್ ನೀಡಿದ ವರ್ತಕರಿಂದ ಬಾಕಿ ತೆರಿಗೆಯನ್ನು ವಸೂಲಿ ಮಾಡುವುದಿಲ್ಲ. ಆದರೆ ವರ್ತಕರು ಜಿಎಸ್‌ಟಿ ನೋಂದಣಿ ಮಾಡಿಕೊಳ್ಳಬೇಕು. ಈಗ ಕೊಟ್ಟಿರುವ ನೋಟೀಸ್ ಮೇಲೆ ವಸೂಲಾತಿ, ಕ್ರಮ ಕೈಗೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಸಿದ್ದರಾಮಯ್ಯ, ಮುಖ್ಯಮಂತ್ರಿ**

<><><>

ರಾಜ್ಯದಲ್ಲಿ ಸೆಪ್ಟಂಬರ್ ೨೨ ರಿಂದ ಅಕ್ಟೋಬರ್ ೭ ರವರೆಗೆ ೧೫ ದಿನಗಳ ಕಾಲ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತಾದ ಪೂರ್ವಭಾವಿ ಸಭೆಯಲ್ಲಿ ಅಕ್ಟೋಬರ್ ಕೊನೆಯ ಒಳಗಾಗಿ ಸಮೀಕ್ಷೆ ವರದಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ. ರಾಜ್ಯದ ಎಲ್ಲಾ ೭ ಕೋಟಿ ಜನರ ಸಮೀಕ್ಷೆ ನಡೆಸಲಾಗುವುದು. ಜಾತಿ ತಾರತಮ್ಯ ನಿವಾರಣೆ ಮಾಡುವುದು ಗಣತಿಯ ಮುಖ್ಯ ಉದ್ದೇಶ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ರಾಜ್ಯದ ಪ್ರತಿಯೊಬ್ಬರ ಆರ್ಥಿಕ ಪರಿಸ್ಥಿತಿ, ಜಮೀನು ಇದೆಯೇ ಇಲ್ಲವೇ ಸೇರಿದಂತೆ ಸಮಗ್ರ ಸಮೀಕ್ಷೆ ನಡೆಯಬೇಕು. ಈ ಸಮೀಕ್ಷೆ ವರದಿ ಮುಂದಿನ ಬಜೆಟ್ ಸಿದ್ಧಪಡಿಸುವ ಸಂದರ್ಭದಲ್ಲಿ ಆಧಾರವಾಗಲಿದೆ. ಈ ಬಾರಿಯ ಸಮೀಕ್ಷೆ ದೇಶದಲ್ಲೇ ಮಾದರಿ ಸಮೀಕ್ಷೆಯಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಮೀಕ್ಷೆ ಕಾರ್ಯದ ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ ಕೈಗೊಳ್ಳಲಾಗಿದೆ.

<><><>

ಕೇಂದ್ರ ಸರ್ಕಾರ ಮಹಾದಾಯಿ ಯೋಜನೆಗೆ ಯಾವುದೇ ಕಾರಣಕ್ಕೂ ಅನುಮೋದನೆ ನೀಡುವುದಿಲ್ಲವೆಂದು ಕೇಂದ್ರ ಪರಿಸರ, ಅರಣ್ಯ ಖಾತೆ ಸಚಿವ ಭೂಪೇಂದ್ರ ಯಾದವ್ ಭರವಸೆ ನೀಡಿದ್ದಾರೆ ಎಂದು ಗೋವಾ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ತಿಳಿಸಿದ್ದಾರೆ. ಇದು ರಾಜ್ಯಕ್ಕೆ ಆಘಾತ ಉಂಟುಮಾಡಿದೆ ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ. ನ್ಯಾಯಾಂಗದ ಯಾವುದೇ ಅಡೆತಡೆ ಇಲ್ಲದಿದ್ದರೂ ರಾಜ್ಯದ ವಿರುದ್ಧ ಮಲತಾಯಿ ಧೋರಣೆ ಅನುಸರಿಸುತ್ತಾ ನ್ಯಾಯಯುತವಾದ ಮತ್ತು ಕಾನೂನುಬದ್ಧವಾದ ಹಾಗೂ ಸಂವಿಧಾನಾತ್ಮಕ ರಕ್ಷಣೆ ಹೊಂದಿರುವ ಯೋಜನೆಗಳನ್ನು ಅನುಷ್ಠಾನ ಮಾಡುವಲ್ಲಿ ಅಡ್ಡಿ

ಮಾಡುತ್ತಿರುವುದು ಒಕ್ಕೂಟ ವ್ಯವಸ್ಥೆಗೆ ಅನ್ಯಾಯವಾಗುತ್ತಿದೆ. ಉತ್ತರ ಕರ್ನಾಟಕ ಜನರ ಹಾಗೂ ರೈತರ ಹಿತ ಗಮನಿಸಿ, ಕೇಂದ್ರ ಸರ್ಕಾರ ತಕ್ಷಣ ಅನುಮತಿ ನೀಡುವಂತೆ ಹೆಚ್.ಕೆ.ಪಾಟೀಲ್ ಒತ್ತಾಯಿಸಿದ್ದಾರೆ.

**ಧ್ವನಿ : ಹೆಚ್.ಕೆ. ಪಾಟೀಲ್**

<><><>

೨೦೨೪ರ ವೇಳೆಗೆ ದೇಶಾದ್ಯಂತ ಡಿಡಿ ಉಚಿತ ಡಿಶ್ ಸುಮಾರು ೪೯ ದಶಲಕ್ಷ ಮನೆಗಳನ್ನು ತಲುಪಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ತಿಳಿಸಿದ್ದಾರೆ. ೨೦೧೮ ರಲ್ಲಿ ಈ ಸಂಖ್ಯೆ ೩೩ ದಶಲಕ್ಷ ಇತ್ತು. ಇದು ಪ್ರೇಕ್ಷಕರ ಸಕಾರಾತ್ಮಕ ಬೆಳವಣಿಗೆಯನ್ನು ಸೂಚಿಸುತ್ತದೆ ಎಂದು ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಡಿಡಿ ಉಚಿತ ಡಿಶ್, ಪ್ರಸಾರ ಭಾರತಿಯ ಉಚಿತ ಡಿಟಿಎಚ್ ವೇದಿಕೆಯಾಗಿದೆ. ಸರ್ಕಾರದ ಪ್ರಮುಖ ಯೋಜನೆಗಳು ಮತ್ತು ಸಾರ್ವಜನಿಕ ಜಾಗೃತಿ ಅಭಿಯಾನಗಳನ್ನು ಡಿಡಿ ಉಚಿತ ಡಿಶ್‌ನಲ್ಲಿ ದೂರದರ್ಶನದ ವಿವಿಧ ರಾಷ್ಟ್ರೀಯ ಮತ್ತು ಪ್ರಾದೇಶಿಕ ಚಾನೆಲ್‌ಗಳ ಕಾರ್ಯಕ್ರಮಗಳ ಮೂಲಕ ಪ್ರಸಾರ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><>

ಬೆಂಗಳೂರಿನ ಕಲಾಸಿಪಾಳ್ಯ ಬಸ್ ನಿಲ್ದಾಣದಲ್ಲಿ ಜಿಲೆಟಿನ್ ಕಡ್ಡಿಗಳು ಹಾಗೂ ಸ್ಫೋಟಕ ವಸ್ತುಗಳು ಪತ್ತೆಯಾಗಿವೆ. ಮಾಹಿತಿ ಸಿಗುತ್ತಿದ್ದಂತೆ ಸ್ಥಳಕ್ಕೆ ಧಾವಿಸಿದ ಪೊಲೀಸರು ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಜನಸಂದಣಿಯಿಂದ ಕೂಡಿದ್ದ ಕಲಾಸಿಪಾಳ್ಯದ ಬಸ್ ನಿಲ್ದಾಣದ ಸಾರ್ವಜನಿಕ ಶೌಚಾಲಯದ ಹೊರಗೆ ಅನುಮಾಸ್ಪದ ಚೀಲ ಪತ್ತೆಯಾಗಿತ್ತು. ಕಲಾಸಿಪಾಳ್ಯ ಪೊಲೀಸರು ಘಟನೆ ಕುರಿತಂತೆ ತನಿಖೆ ಆರಂಭಿಸಿದ್ದಾರೆ.

<><><>

ಹಣಕಾಸು ಸೇರ್ಪಡೆ ಪರಿಪೂರ್ಣತಾ ಅಭಿಯಾನದಡಿಯಲ್ಲಿ, ಕರ್ನಾಟಕವು ೧೬೧ ಹಣಕಾಸು ಸಾಕ್ಷರತಾ ಕೇಂದ್ರಗಳ ಮೂಲಕ ಪ್ರಮುಖ ಹಣಕಾಸು ಯೋಜನೆಗಳ ಸಮಗ್ರ ವ್ಯಾಪ್ತಿಗೆ ಕಾರ್ಯ

ನಿರ್ವಹಿಸುತ್ತಿದೆ ಎಂದು ಕೆನರಾ ಬ್ಯಾಂಕಿನ ಜನರಲ್ ಮ್ಯಾನೇಜರ್ ಭಾಸ್ಕರ ಚಕ್ರವರ್ತಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಪತ್ರಿಕಾ ಮಾಹಿತಿ ಬ್ಯೂರೋ ಆಯೋಜಿಸಿದ್ದ ಅಂತರ್ ಮಾಧ್ಯಮ ಪ್ರಚಾರ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಾದ್ಯಂತ ೫ ಸಾವಿರದ ೯೪೮ ಗ್ರಾಮ ಪಂಚಾಯಿತಿಗಳನ್ನು ತಲುಪುವ ಗುರಿಯನ್ನು ಹೊಂದಿದೆ. ಇಲ್ಲಿಯವರೆಗೆ, ೨ ಸಾವಿರದ ೧೬೪ ಗ್ರಾಮ ಪಂಚಾಯಿತಿಗಳನ್ನು ಒಳಗೊಂಡಿದೆ. ಪ್ರಧಾನ ಮಂತ್ರಿ ಜನ್ ಧನ್ ಯೋಜನೆ ಅಡಿಯಲ್ಲಿ, ಮಾರ್ಚ್ ೩೧ ರ ಹೊತ್ತಿಗೆ ಕರ್ನಾಟಕದಲ್ಲಿ ೨.೦೪ ಕೋಟಿ ಜನರು ದಾಖಲಾಗಿದ್ದಾರೆ. ಜುಲೈ ೧, ೨೦೨೫ ರಂದು ಭಾರತದಾದ್ಯಂತ ಪ್ರಾರಂಭವಾದ ಮೂರು ತಿಂಗಳ ಅಭಿಯಾನವು, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಮತ್ತು ಅಟಲ್ ಪಿಂಚಣಿ ಯೋಜನೆಯಂತಹ ಪ್ರಮುಖ ಯೋಜನೆಗಳಲ್ಲಿ ಫಲಾನುಭವಿಗಳನ್ನು ದಾಖಲಿಸುವ ಮೂಲಕ ಆರ್ಥಿಕ ಸೇರ್ಪಡೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದು ಮಾಹಿತಿ ನೀಡಿದ್ದಾರೆ. ಸಭೆಯ ಅಧ್ಯಕ್ಷತೆಯನ್ನು ಪಿಐಬಿ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ. ರವೀಂದ್ರ ವಹಿಸಿದ್ದರು.

<><><><>

ಕೋಲಾರ ಜಿಲ್ಲಾ ಮಾರ್ಗದರ್ಶಿ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಂಯುಕ್ತಾಶ್ರಯದಲ್ಲಿ ಮಾಲೂರು ತಾಲೂಕಿನ ಕೆ.ಜಿ.ಹಳ್ಳಿ ಗ್ರಾಮಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಮುರುಗೇಶ್ ಚಾಲನೆ ನೀಡಿದರು. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಆರ್ಥಿಕ ಸಾಕ್ಷರತಾ ಸಲಹೆಗಾರ ನಾಗೇಂದ್ರಕುಮಾರ್ ಮಾತನಾಡಿ, ಯಾವುದೇ ಬ್ಯಾಂಕಿನಲ್ಲಿ ಉಳಿತಾಯ ಖಾತೆ ಹೊಂದಿರುವ ಪ್ರತಿಯೊಬ್ಬ ನಾಗರಿಕನೂ ವಿಮಾ ಯೋಜನೆಯ ಲಾಭ ಪಡೆಯಬಹುದಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ- ನಾಗೇಂದ್ರ ಕುಮಾರ್, ಆರ್ಥಿಕ ಸಾಕ್ಷರತಾ ಸಲಹೆಗಾರ**

ಆರ್ ಬಿಐ ಪ್ರತಿನಿಧಿ ರಾಜೇಶ್ ಮಾತನಾಡಿ, ಬ್ಯಾಂಕ್ ಖಾತೆ ವಿವರ, ಒಟಿಪಿ ಅಥವಾ ಮೊಬೈಲ್‌ಗೆ ಬರುವ ಅನುಮಾನಾಸ್ಪದ ಲಿಂಕ್‌ಗಳನ್ನು ಯಾರಿಗೂ ಹಂಚಬಾರದು. ಕೇವಲ ರಾಷ್ಟ್ರೀಕೃತ ಬ್ಯಾಂಕ್ ಗಳ ಆಪ್‌ಗಳನ್ನಷ್ಟೇ ಬಳಸಿ ಎಂದು ಮಾಹಿತಿ ನೀಡಿದರು.

<><><><>

ಧಾರವಾಡ ಜಿಲ್ಲೆಯ ಮನ್ಸೂರ್ ಗ್ರಾಮದಲ್ಲಿ ಲೀಡ್ ಬ್ಯಾಂಕ್‌ನ ಪ್ರಾಯೋಜಕತ್ವದಲ್ಲಿ ಭಾರತ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ ಕುರಿತ ಆರ್ಥಿಕ ಸಾಕ್ಷರತೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಹಾಗೂ ಅಟಲ್ ಪೆನ್ಷನ್ ಯೋಜನೆಯ ಕುರಿತು ಗ್ರಾಮೀಣ ಜನತೆಗೆ ಸುದೀರ್ಘವಾಗಿ ಅರಿವು ಮೂಡಿಸಲಾಯಿತು. ಶ್ರೀ ಶಕ್ತಿ ಸ್ವ ಸಹಾಯ ಗುಂಪಿನ ಮಹಿಳೆಯರು ಹಾಗೂ ಫಲಾನುಭವಿಯಾದ ಕರೆವ್ವ ಮಾತನಾಡಿ, 'ಬ್ಯಾಂಕಿನಿಂದ ಸಾಲ ಪಡೆದು ಇಂದು ನಾವು ಆರ್ಥಿಕವಾಗಿ ಸ್ವಾವಲಂಬಿಗಳಾಗಿದ್ದೇವೆ" ಎಂದು ತಮ್ಮ ಅನುಭವಗಳನ್ನು ಹಂಚಿಕೊಂಡರು.

**ಧ್ವನಿ : ಕರೆವ್ವ**

<><><><>

ಆದಿ ಕರ್ಮಯೋಗಿ ಉಪಕ್ರಮದ ಕುರಿತಾದ ರಾಜ್ಯ-ಪ್ರಕ್ರಿಯೆ ಪ್ರಯೋಗಾಲಯ ಕಾರ್ಯಕ್ರಮವನ್ನು ಬುಡಕಟ್ಟು ಕಲ್ಯಾಣ ಇಲಾಖೆಯ ಕಾರ್ಯದರ್ಶಿ ರಂದೀಪ್ ಮತ್ತು ಬುಡಕಟ್ಟು ಕಲ್ಯಾಣ ಇಲಾಖೆಯ ನಿರ್ದೇಶಕ ಶ್ರೀ ಯೋಗೇಶ್ ಟಿ. ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಏಳು ಜಿಲ್ಲೆಗಳ ವಿವಿಧ ಇಲಾಖೆಗಳು ಮತ್ತು ತರಬೇತುದಾರರು ಸಕ್ರಿಯವಾಗಿ ಭಾಗವಹಿಸಿದ್ದರು. ಬುಡಕಟ್ಟು ಕಲ್ಯಾಣ ಇಲಾಖೆಯ ಕಾರ್ಯದರ್ಶಿ ರಂದೀಪ್ ಮಾತನಾಡಿ ಉಪಕ್ರಮದ ಮಹತ್ವ ಮತ್ತು ಬುಡಕಟ್ಟು ಸಮುದಾಯಗಳ ಸಾಮರ್ಥ್ಯಗಳನ್ನು ನಿರ್ಮಿಸುವ ಇಲಾಖೆಯ ಬದ್ಧತೆಯನ್ನು ಪ್ರತಿಪಾದಿಸಿದರು.

<><><><>

ಕಾರ್ಮಿಕ ಇಲಾಖೆಯ ಹೊಸ ಯೋಜನೆಗಳನ್ನು ಕಾರ್ಮಿಕರಿಗೆ ತಲುಪಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಪ್ರಸಕ್ತ ೯೧ ವರ್ಗದ ಕಾರ್ಮಿಕರಿಗೆ ಸಹಾಯ ಮಾಡಲೆಂದು ಕಾರ್ಮಿಕರನ್ನು ಗುರುತಿಸಿ ದತ್ತಾಂಶಗಳನ್ನು ಸಂಗ್ರಹಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ರೂಪಿಸಿರುವ ಪ್ರಧಾನ ಮಂತ್ರಿಗಳ ೧೫ ಅಂಶಗಳ ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಪ್ರಧಾನ ಮಂತ್ರಿಗಳ ಹೊಸ ೧೫ ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಅಲ್ಪಸಂಖ್ಯಾತರ ಸಮುದಾಯಗಳಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ ಹಾಗೂ ಬಸವ ವಸತಿ ಯೋಜನೆಯಡಿ ಅರ್ಹ ಫಲಾನುಭವಿ ಗಳಿಗೆ ಸೂರು ಕಲ್ಪಿಸಲು ಎರಡು ಎಕರೆ ನಿವೇಶನ ಮಂಜೂರು ಮಾಡಬೇಕು. ಇದರಿಂದ ಸೂರಿಲ್ಲದಿರುವ ಅರ್ಹ ಫಲಾನುಭವಿಗಳಿಗೆ ವಸತಿ ಯೋಜನೆಯಡಿ ಶಾಶ್ವತ ಸೂರು ಕಲ್ಪಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

<><><><>

ಕಾರ್ಮಿಕರ ರಾಜ್ಯ ವಿಮಾ ನಿಗಮವು ಕಾರ್ಮಿಕರ ಕಲ್ಯಾಣಕ್ಕಾಗಿ ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ-೨೦೨೫ ಎಂಬ ನವೀಕೃತ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಡಿಸೆಂಬರ್ ೩೧ ರವರೆಗೆ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ವಿಜಯಪುರ ಜಿಲ್ಲಾ ಶಾಖಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಮೂಡ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನೂ ಆರೋಪಿಯಾಗಿದ್ದು, ಸುಪ್ರೀಂ ಕೋರ್ಟ್ ಅವರನ್ನು ನಿರಪರಾಧಿ ಎಂದು ಘೋಷಿಸಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಈ ಪ್ರಕರಣದಲ್ಲಿ ಮುಖ್ಯಮಂತ್ರಿ ಹಾಗೂ ಅವರ ಕುಟುಂಬಸ್ಥರು ಭಾಗೀದಾರರು ಎಂದು ಅವರು ಪುನರುಚ್ಚರಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>